# ಪೌಲನು ಫಿಲಿಪ್ಪಿಯರಿಗೆ ಬರೆದ ಪತ್ರ

## ಮುನ್ನುಡಿ

ರೋಮ್ ಸಾಮ್ರಾಜ್ಯದ ಮಕೆದೋನ್ಯ ಪ್ರಾಂತ್ಯದಲ್ಲಿ ಪೌಲನು ಶುಭಸಂದೇಶವನ್ನು ಪ್ರಚಾರಮಾಡಿ ಧರ್ಮಸಭೆಯನ್ನು ಸ್ಥಾಪಿಸಿದನು. ಅಲ್ಲಿನ ಫಿಲಿಪ್ಪಿ ಎಂಬ ಪಟ್ಟಣದ ಹೆಸರನ್ನೇ ಆ ಸಭೆಗೆ ಇಡಲಾಯಿತು. ಇದೇ ಯೂರೋಪ್ ಖಂಡದಲ್ಲಿ ಸ್ಥಾಪಿತವಾದ ಪ್ರಪ್ರಥಮ ಕ್ರೈಸ್ತಸಭೆ. ಶುಭಸಂದೇಶಕ್ಕಾಗಿ ಪೌಲನು ಎಷ್ಟೋ ಸಾರಿ ಸೆರೆವಾಸಕ್ಕೆ ಗುರಿಯಾಗಬೇಕಾಗುತ್ತಿತ್ತು. ಸೆರೆಯಿಂದಲೂ ಪತ್ರಗಳನ್ನು ಬರೆದು ಭಕ್ತಾದಿಗಳನ್ನು ಹುರಿದುಂಬಿಸುವುದು ಆತನ ವಾಡಿಕೆಯಾಗಿತ್ತು. ಹೀಗೆ ಪೌಲನು ಬರೆದ ಪತ್ರಗಳಲ್ಲಿ ಫಿಲಿಪ್ಪಿಯರಿಗೆ ಬರೆದ ಪತ್ರವೂ ಒಂದು.

ಈ ಪತ್ರವನ್ನು ಬರೆಯುವಾಗ ಪೌಲನಿಗೆ ಬಹಳ ಮನೋವೇದನೆಯಿತ್ತು. ಒಂದು ಕಡೆ ಸೆರೆವಾಸದ ದುಃಖದುರಿತಗಳು ಅವನನ್ನು ಕಾಡುತ್ತಿದ್ದರೆ, ಇನ್ನೊಂದು ಕಡೆ ಸುಳ್ಳುಬೋಧಕರ ಅಪಪ್ರಚಾರಗಳೂ ಸಹೋದ್ಯೋಗಿಗಳ ಪ್ರತಿಭಟನೆಗಳೂ ಅವನ ಹೃದಯವನ್ನು ತಿವಿಯುತ್ತಿದ್ದವು. ಹೀಗಿದ್ದರೂ ಅವನು ಬರೆದಿರುವ ಈ ಪತ್ರ ಶಾಂತಿ ಸಹನೆಯ ಮಾತುಗಳಿಂದಲೂ ತಪ್ಪಿತಸ್ಥರು ಸರಿದಾರಿಗೆ ಬರಲೆಂಬ ಹಿತವಚನಗಳಿಂದಲೂ ಕೂಡಿದೆ. ಇದಕ್ಕೆ ಕ್ರಿಸ್ತಯೇಸುವಿನಲ್ಲಿ ಆತನಿಗಿದ್ದ ಆಳವಾದ ವಿಶ್ವಾಸವೇ ಕಾರಣ.

ಫಿಲಿಪ್ಪಿಯ ಸಭೆಯವರು ಕಷ್ಟದಲ್ಲಿದ್ದ ತನಗೆ ಕಳುಹಿಸಿದ್ದ ಆರ್ಥಿಕ ಸಹಾಯಕ್ಕಾಗಿ ಅವರಿಗೆ ಕೃತಜ್ಞತೆಯನ್ನು ಸಲ್ಲಿಸುವುದೇ ಈ ಪತ್ರದ ಮುಖ್ಯ ಉದ್ದೇಶ. ಇದನ್ನು ಬರೆಯುವಾಗ ತನ್ನ ಕಷ್ಟಸಂಕಟಗಳನ್ನು ಕೇಳಿಯಾಗಲಿ, ತಾವೇ ಸ್ವತಃ ಅನುಭವಿಸುತ್ತಿರುವ ದುಃಖದುಗುಡದಿಂದಾಗಲಿ, ಫಿಲಿಪ್ಪಿಯರು ಎದೆಗುಂದದೆ ವಿಶ್ವಾಸದಲ್ಲಿ ಸ್ಥಿರವಾಗಿರಬೇಕೆಂದು ಲೇಖಕನು ಅವರನ್ನು ಪ್ರೋತ್ಸಾಹಿಸುತ್ತಾನೆ. ಕ್ರಿಸ್ತಯೇಸುವಿನಂತೆ ದೀನಮನಸ್ಕರಾಗಿರಬೇಕು; ಅಹಂಕಾರ, ಅಹಂಭಾವಗಳನ್ನು ತೊರೆದುಬಿಡಬೇಕು ಎಂದು ಅವರನ್ನು ಒತ್ತಾಯಿಸುತ್ತಾನೆ. ಅವರಿಗೆ ಕ್ರಿಸ್ತಯೇಸುವಿನಲ್ಲಿ ಲಭಿಸಿರುವ ಸಹಬಾಳ್ವೆ, ಸಂತೋಷ ಮುಂತಾದುವುಗಳು ಹಳೆಯ ಒಡಂಬಡಿಕೆಯ ವಿಧಿನಿಯಮಗಳ ಅನುಸರಣೆಯಿಂದಲ್ಲ, ಅವು ವಿಶ್ವಾಸದ ಆಧಾರದ ಮೇಲೆ ದೇವರೇ ನೀಡಿರುವ ಉದಾತ್ತ ಕೊಡುಗೆಗಳು ಎಂದು ಒತ್ತಿ ಹೇಳುತ್ತಾನೆ.

ಇದಲ್ಲದೆ ಕ್ರೈಸ್ತಜೀವನದಲ್ಲಿ ಸಂತೋಷ–ಸಮಾಧಾನ, ಧೈರ್ಯ–ಸ್ಥೈರ್ಯ, ಒಗ್ಗಟ್ಟು–ಒಪ್ಪಂದ, ಸ್ಥಿರತೆ–ಸ್ಥೈರಣೆ ಇವೇ ಮುಂತಾದ ಸದ್ಗುಣಗಳ ಪಾತ್ರ ಗಮನಾರ್ಹ ಫಿಲಿಪ್ಪಿಯರ ಮೇಲೆ ಪೌಲನಿಗೆ ಅಪಾರ ಪ್ರೀತಿ ಇತ್ತೆಂದು ಈ ಪತ್ರದಿಂದ ವೇದ್ಯವಾಗುತ್ತದೆ.

**ಪರಿವಿಡಿ**


| | | |
|---|---|---|
| ಪೀಠಿಕೆ | – | 1.1 – 1.11 |
| ಪೌಲನ ಪರಿಸ್ಥಿತಿ | – | 1.12 – 1.26 |
| ಕ್ರಿಸ್ತಯೇಸುವಿನಲ್ಲಿ ಹೊಸ ಜೀವನ | – | 1.27 – 2.18 |
| ಶತ್ರುಗಳ ಬಗ್ಗೆ ಎಚ್ಚರಿಕೆ | – | 3.1 – 4.9 |
| ಪೌಲನು ಮತ್ತು ಫಿಲಿಪ್ಪಿಯ ಮಿತ್ರರು | – | 4.10 – 4.20 |
| ಸಮಾಪ್ತಿ | – | 4.21 – 4.23 |

## ಪೀಠಿಕೆ

**1** ಕ್ರಿಸ್ತಯೇಸುವಿನಲ್ಲಿ ಜೀವಿಸುವ ಫಿಲಿಪ್ಪಿಯ ದೇವಜನರಿಗೆ, ಧರ್ಮಾಧಿಕಾರಿಗಳಿಗೆ ಹಾಗೂ ಧರ್ಮಸೇವಕರಿಗೆ – ಕ್ರಿಸ್ತಯೇಸುವಿನ ದಾಸರಾದ ಪೌಲ ಮತ್ತು ತಿಮೊಥೇಯರು ಜೊತೆಗೂಡಿ ಬರೆಯುವ ಪತ್ರ.

2 ನಮ್ಮೆಲ್ಲರ ಪಿತನಾದ ದೇವರ ಮತ್ತು ಪ್ರಭುವಾದ ಯೇಸುಕ್ರಿಸ್ತರ ಆಶೀರ್ವಾದವೂ ಶಾಂತಿ ಸಮಾಧಾನವೂ ನಿಮಗೆ ಲಭಿಸಲಿ !

## ಫಿಲಿಪ್ಪಿಯರಿಗಾಗಿ ಪ್ರಾರ್ಥನೆ

3 ನಿಮ್ಮನ್ನು ಜ್ಞಾಪಿಸಿಕೊಳ್ಳುವಾಗಲೆಲ್ಲ ನಾನು ದೇವರಿಗೆ ಕೃತಜ್ಞತೆಯನ್ನು ಸಲ್ಲಿಸುತ್ತೇನೆ.
[4]ನಿಮಗೋಸ್ಕರ ಯಾವಾಗಲೂ ತುಂಬುಹೃದಯದಿಂದ ಪ್ರಾರ್ಥಿಸುತ್ತೇನೆ. [5]ಏಕೆಂದರೆ, ನಾನು ನಿಮ್ಮನ್ನು
ಸಂಧಿಸಿದ ಮೊದಲ ದಿನದಿಂದ ಇಂದಿನವರೆಗೂ ನೀವು ನನ್ನೊಡನೆ ಶುಭಸಂದೇಶದ ಪ್ರಚಾರಕಾರ್ಯದಲ್ಲಿ
ಸಹಕರಿಸುತ್ತಿರುವಿರಿ. [6]ಈ ಸತ್ಕಾರ್ಯವನ್ನು ನಿಮ್ಮಲ್ಲಿ ಪ್ರಾರಂಭಿಸಿದ ದೇವರು ಅದನ್ನು ಮುಂದುವರಿಸುತ್ತಾ,
ಯೇಸುಕ್ರಿಸ್ತರು ಪುನರಾಗಮಿಸುವಷ್ಟರಲ್ಲಿ ಪೂರೈಸುವರು ಎಂಬುದೇ ನನ್ನ ದೃಢ ನಂಬಿಕೆ. [7]ನೀವು ನನಗೆ
ಆತ್ಮೀಯರು. ಆದಕಾರಣ, ನಿಮ್ಮೆಲ್ಲರನ್ನು ಕುರಿತು ನನಗೆ ಹೀಗನ್ನಿಸುವುದು ಸೂಕ್ತವೇ ಸರಿ. ನಾನು
ಸೆರೆಯಲ್ಲಿರುವಾಗಲೂ ಶುಭಸಂದೇಶಕ್ಕಾಗಿ ಹೋರಾಡಿ ಅದನ್ನು ಸ್ಥಿರಗೊಳಿಸುವಾಗಲೂ ದೇವರ
ಅನುಗ್ರಹದಲ್ಲಿ ನೀವು ನನ್ನೊಂದಿಗೆ ಸಹಭಾಗಿಗಳಾಗಿದ್ದಿರಿ. [8]ಕ್ರಿಸ್ತಯೇಸುವಿನಲ್ಲಿರುವ ಉತ್ಕಟ ಪ್ರೀತಿಯಿಂದಲೇ
ನಾನು ನಿಮ್ಮೆಲ್ಲರಿಗಾಗಿ ಹಂಬಲಿಸುತ್ತಿದ್ದೇನೆ; ಇದಕ್ಕೆ ದೇವರೇ ಸಾಕ್ಷಿ. [9]ನೀವು ಪ್ರೀತಿಯಲ್ಲಿ ಪ್ರವರ್ಧಿಸುತ್ತಾ,
ಪೂರ್ಣ ಜ್ಞಾನ ಹಾಗೂ ವಿವೇಕದಿಂದ ಕೂಡಿದವರಾಗಬೇಕೆಂಬುದೇ ನನ್ನ ಪ್ರಾರ್ಥನೆ. [10]ಹೀಗೆ ನೀವು
ಉತ್ತಮೋತ್ತಮವಾದುವುಗಳನ್ನೇ ಆರಿಸಿಕೊಂಡು, ಪ್ರಭುಕ್ರಿಸ್ತರ ದಿನದಂದು ನಿರ್ದೋಷಿಗಳೂ ನಿಷ್ಕಳಂಕರೂ
ಆಗಿ ಕಾಣಿಸಿಕೊಳ್ಳುವಿರಿ. [11]ಯೇಸುಕ್ರಿಸ್ತರ ಮುಖಾಂತರ ಲಭಿಸುವ ಸತ್ಸಂಬಂಧದ ಫಲಗಳಿಂದ
ತುಂಬಿದವರಾಗಿ ದೇವರಿಗೆ ಸ್ತುತಿಸಲ್ಲಿಸಿ, ಅವರ ಮಹಿಮೆ ಬೆಳಗುವಂತೆ ಮಾಡುವಿರಿ.

## ಯೇಸುವೇ ನನ್ನ ಜೀವಾಳ

12 ಸಹೋದರರೇ, ನನಗೆ ಬಂದೊದಗಿರುವುದೆಲ್ಲವೂ ಶುಭಸಂದೇಶದ ಬೆಳವಣಿಗೆಗೆ ಹಿತಕರವಾಗಿ
ಪರಿಣಮಿಸಿದೆ. ಇದು ನಿಮಗೆ ತಿಳಿದಿರಬೇಕೆಂಬುದೇ ನನ್ನ ಆಶಯ. [13]ಯೇಸುಕ್ರಿಸ್ತರ ಸಲುವಾಗಿಯೇ ನಾನು
ಸೆರೆಯಲ್ಲಿರುವುದೆಂದು ಇಲ್ಲಿಯ ಅರಮನೆಯ ಕಾವಲಾಳುಗಳಿಗೂ ಇತರರೆಲ್ಲರಿಗೂ ಚೆನ್ನಾಗಿ ತಿಳಿದಿದೆ.

14 ನನ್ನ ಬಂಧನದಿಂದಾಗಿ ನಮ್ಮ ಸಹೋದರರಲ್ಲಿ ಅನೇಕರು ದೇವರಲ್ಲಿ ಭರವಸೆಯಿಟ್ಟಿರುವರು.
ಅಳುಕಿಲ್ಲದೆ, ಅಂಜಿಕೆಯಿಲ್ಲದೆ ದಿಟ್ಟತನದಿಂದ ಶುಭಸಂದೇಶವನ್ನು ಅವರು ಸಾರುತ್ತಿರುವರು. [15]ಕೆಲವರೇನೋ
ಅಸೂಯೆಯಿಂದಲೂ ವೈಮನಸ್ಸಿನಿಂದಲೂ ಕ್ರಿಸ್ತಯೇಸುವನ್ನು ಸಾರುತ್ತಿರುವುದು ನಿಜ; ಆದರೆ ಮಿಕ್ಕವರು
ಸದುದ್ದೇಶದಿಂದ ಸಾರುತ್ತಿದ್ದಾರೆ; [16]ಒಲವಿನ ಒತ್ತಾಯದಿಂದ ಸಾರುತ್ತಿದ್ದಾರೆ; ಶುಭಸಂದೇಶದ ಸತ್ಯವನ್ನು
ಸಮರ್ಥಿಸುವುದಕ್ಕಾಗಿ ನಾನು ಬಂಧಿತನೆಂದು ಇವರು ಬಲ್ಲರು. [17]ಆ ಕೆಲವರಾದರೋ ಸ್ವಾರ್ಥ
ಸಾಧನೆಗಾಗಿಯೇ ಹೊರತು ಪ್ರಾಮಾಣಿಕರಾಗಿ ಕ್ರಿಸ್ತಯೇಸುವನ್ನು ಸಾರುತ್ತಿಲ್ಲ. ಸೆರೆಯಲ್ಲಿರುವ ನನ್ನನ್ನು ಇನ್ನೂ
ಹೆಚ್ಚಿನ ಕಷ್ಟಕ್ಕೆ ಗುರಿಮಾಡಬೇಕೆಂಬುದೇ ಅವರ ಉದ್ದೇಶ.

18 ಅವರ ಉದ್ದೇಶ ಏನೇ ಆಗಿರಲಿ, ನನಗದು ಮುಖ್ಯವಲ್ಲ. ಕ್ರಿಸ್ತಯೇಸುವನ್ನು ಅವರು
ಸಾರುತ್ತಿರುವುದೇ ನನಗೆ ಸಂತೋಷ. [19]ಹೌದು, ನನಗದು ತುಂಬಾ ಸಂತೋಷದ ವಿಷಯ. ನಿಮ್ಮ
ಪ್ರಾರ್ಥನಾ ಫಲದಿಂದಲೂ ಯೇಸುಕ್ರಿಸ್ತರು ಕೊಡುವ ಆತ್ಮದ ನೆರವಿನಿಂದಲೂ ನನಗೆ ಬಿಡುಗಡೆ
ಖಚಿತವೆಂದು ಬಲ್ಲೆ. [20]ನನ್ನ ಕರ್ತವ್ಯಪಾಲನೆಯಲ್ಲಿ ನಾಚುವಂಥ ಸಂದರ್ಭವು ನನಗೆಂದಿಗೂ ಬರದೆಂದು
ಬಲ್ಲೆ; ನಾನು ಬದುಕಿದರೂ ಸರಿ, ಸತ್ತರೂ ಸರಿ; ನನ್ನ ದೇಹದ ಮೂಲಕ ಕ್ರಿಸ್ತಯೇಸುವಿಗೆ ಎಂದಿನಂತೆ
ಈಗಲೂ ಮಹಿಮೆ ಉಂಟಾಗಬೇಕೆಂಬುದೇ ನನ್ನ ಉತ್ಕಟ ಆಕಾಂಕ್ಷೆ ಹಾಗೂ ನಿರೀಕ್ಷೆ. [21]ನನಗಂತೂ

ಬದುಕುವುದೆಂದರೆ ಕ್ರಿಸ್ತಯೇಸುವೇ; ಸಾಯುವುದು ಲಾಭವೇ. 22ದೈಹಿಕವಾಗಿ ಬದುಕುವುದು
ಫಲಪ್ರದವಾಗಿದ್ದರೆ, ನಾನು ಬದುಕುವುದು ಉತ್ತಮವೋ ಅಥವಾ ಸಾಯುವುದು ಸೂಕ್ತವೋ ನನಗೆ
ತಿಳಿಯದು. 23ಉಭಯ ಸಂಕಟಕ್ಕೆ ಸಿಲುಕಿದ್ದೇನೆ. ಒಂದು ಕಡೆ, ಈ ಬದುಕನ್ನು ತೊರೆದು
ಕ್ರಿಸ್ತಯೇಸುವಿನೊಡನೆ ಒಂದಾಗಿರಬೇಕೆಂಬುದೇ ನನ್ನ ಬಯಕೆ. ಇದು ಎಷ್ಟೋ ಮೇಲಾದುದು.
24ಮತ್ತೊಂದು ಕಡೆ, ನಿಮಗೋಸ್ಕರ ಇಹದಲ್ಲಿದ್ದು ಜೀವಿಸುವುದು ಅತ್ಯವಶ್ಯಕವಾಗಿದೆ. 25ಇದರಲ್ಲಿ ನನಗೆ
ಎಳ್ಳಷ್ಟೂ ಸಂದೇಹವಿಲ್ಲ. ಈ ಕಾರಣ, ನಾನು ಇಹದಲ್ಲಿ ಉಳಿಯುವೆನೆಂದು ಬಲ್ಲೆ. ನಿಮ್ಮೆಲ್ಲರೊಡನಿದ್ದು,
ಕ್ರೈಸ್ತವಿಶ್ವಾಸದಲ್ಲಿ ನೀವು ವೃದ್ಧಿಯಾಗಿ ಆನಂದಿಸುವಂತೆ ನಿಮಗೆ ನೆರವಾಗುತ್ತೇನೆ. 26ನಿಮ್ಮಲ್ಲಿಗೆ ನಾನು ಮರಳಿ
ಬಂದಾಗ ಕ್ರಿಸ್ತಯೇಸುವಿನಲ್ಲಿ ನೀವು ಹಿರಿಹಿಗ್ಗುವುದಕ್ಕೆ ಮಹದವಕಾಶ ದೊರಕುವುದು. 27ಅದೇನೇ ಇರಲಿ,
ನೀವು ಮಾತ್ರ ಕ್ರಿಸ್ತಯೇಸುವಿನ ಶುಭಸಂದೇಶಕ್ಕೆ ಯೋಗ್ಯರಾಗಿ ನಡೆದುಕೊಳ್ಳಿರಿ. ನಾನು ನಿಮ್ಮಲ್ಲಿಗೆ ಬಂದರೂ
ಸರಿ, ಬಾರದಿದ್ದರೂ ಸರಿ, ಇದು ಮುಖ್ಯವಲ್ಲ. ಶುಭಸಂದೇಶವು ನೀಡುವ ವಿಶ್ವಾಸಕ್ಕಾಗಿ ನೀವು
ಒಮ್ಮನಸ್ಸಿನಿಂದ, ಕೆಚ್ಚಿನಿಂದ ಹೋರಾಡುವುದೇ ಮುಖ್ಯ. ಇದು ನನಗೆ ತಿಳಿದುಬಂದರೆ ಅಷ್ಟೇ ಸಾಕು.
28 ನಿಮ್ಮ ವಿರೋಧಿಗಳಿಗೆ ಯಾವ ವಿಷಯದಲ್ಲೂ ಅಂಜದೆ, ಅಳುಕದೆ ಧೈರ್ಯದಿಂದಿರಿ. ಇದೇ
ಅವರಿಗೆ ಅವರ ವಿನಾಶದ ಸ್ಪಷ್ಟ ಮುನ್ಸೂಚನೆ! ನಿಮಗೆ ದೇವರಿಂದ ಬರುವ ಸಂರಕ್ಷಣೆಯ ಮುನ್ಸೂಚನೆ!
29ಕ್ರಿಸ್ತಯೇಸುವನ್ನು ನೀವು ವಿಶ್ವಾಸಿಸುವುದು ಮಾತ್ರವಲ್ಲ, ಅವರಿಗೋಸ್ಕರ ಸಂಕಷ್ಟಗಳನ್ನು ಅನುಭವಿಸುವ
ಸೌಭಾಗ್ಯವೂ ನಿಮ್ಮದಾಗಿದೆ. 30ನಿಮ್ಮ ಹೋರಾಟವೂ ನಮ್ಮ ಹೋರಾಟವೂ ಒಂದೇ ಆಗಿದೆ. ನಾನು
ಕ್ರಿಸ್ತಯೇಸುವಿಗಾಗಿ ಪಟ್ಟ ಕಷ್ಟವನ್ನು ನೀವು ಕಂಡಿದ್ದೀರಿ. ಈಗಲೂ ಅನುಭವಿಸುತ್ತಿದ್ದೇನೆಂದು ಅರಿತಿದ್ದೀರಿ.

**ದೀನ ಯೇಸುವಿನ ಗುನಗಾನ**

**2** ಕ್ರಿಸ್ತಯೇಸುವಿನಲ್ಲಿ ನಿಮಗೆ ಉತ್ಸಾಹ, ಉತ್ತೇಜನ, ಪ್ರೀತಿ, ಪ್ರೇರಣೆ, ಪವಿತ್ರಾತ್ಮ ಅವರ ಅನ್ಯೋನ್ಯತೆ,
ದೀನದಯಾಳತೆ ಇರುವುದಾದರೆ ಐಕಮತ್ಯದಿಂದ ಬಾಳಿರಿ. 2ನಿಮ್ಮೆಲ್ಲರಲ್ಲಿ ಒಂದೇ ಮನಸ್ಸು, ಒಂದೇ ಪ್ರೀತಿ
ಇರಲಿ. ನಿಮ್ಮ ಗುರಿಧ್ಯೇಯಗಳು ಒಂದೇ ಆಗಿರಲಿ. ಆಗ ನನ್ನ ಸಂತೋಷವು ಸಂಪೂರ್ಣಗೊಳ್ಳುವುದು.
3ಸ್ವಾರ್ಥ ಸಾಧನೆಗಾಗಲಿ, ಡಂಭಾಚಾರಕ್ಕಾಗಲಿ ಏನನ್ನೂ ಮಾಡಬೇಡಿ. ಪರಸ್ಪರ ನಮ್ರತೆಯಿಂದ
ನಡೆದುಕೊಳ್ಳಿ; ಇತರರು ನಿಮಗಿಂತಲೂ ಶ್ರೇಷ್ಠರೆಂದು ಪರಿಗಣಿಸಿರಿ. 4ಸ್ವಹಿತವನ್ನೇ ಗಮನಿಸದೆ ಪರರ
ಹಿತವನ್ನೂ ಬಯಸಿರಿ. 5ಕ್ರಿಸ್ತಯೇಸುವಿನಲ್ಲಿರುವ ಮನೋಭಾವ ನಿಮ್ಮಲ್ಲೂ ನೆಲಸಿರಲಿ:

6 ದೇವಸ್ವರೂಪಿ ತಾನಾಗಿದ್ದರೂ ನಿರುತ
ದೇವರಿಗೆ ಸಮನಾದ ಆ ಸಿರಿ ಪದವಿಯನಾತ
ಹಿಡಿದಿಟ್ಟುಕೊಳ್ಳಲಿಲ್ಲ ಬಿಡಲೊಲ್ಲೆನೆನುತ.
7 ತನ್ನನೇ ಬರಿದು ಮಾಡಿಕೊಂಡು
ದಾಸನ ರೂಪವನು ಧರಿಸಿಕೊಂಡು
ಮನುಜನಾಕಾರದಲಿ ಕಾಣಿಸಿಕೊಂಡು
ನರಮಾನವರಿಗೆ ಸರಿಸಮನಾದ.
8 ತನ್ನನೇ ಆತ ತಗ್ಗಿಸಿಕೊಂಡು
ವಿಧೇಯನಾಗಿ ನಡೆದುಕೊಂಡು
ಮರಣಪರಿಯಂತ, ಹೌದೌದು,
ಶಿಲುಬೆಯ ಮರಣಪರಿಯಂತ ವಿಧೇಯನಾದ.
9 ಎಂತಲೇ ಪರಮೋನ್ನತ
ಸ್ಥಾನಕ್ಕೇರಿಸಿದನಾತನನು
ಇತ್ತನು ಹೆಸರುಗಳೊಳುತ್ತಮ

ಹೆಸರನು ದೇವಪರಮನು.
10 ಯೇಸುವಿನ ಹೆಸರಿಗೆಂದೇ ಮೊಣಕಾಲೂರಿ
ಮಣಿವರು
ಸ್ವರ್ಗವಾಸಿಗಳು, ಭೂನಿವಾಸಿಗಳು,
ಪಾತಾಳ ಜೀವರಾಶಿಗಳು.
11 'ಕ್ರಿಸ್ತ ಯೇಸುವೇ ಪ್ರಭು' ಎಂದೆಲ್ಲರಿಗೆ
ಅರಿಕೆ ಮಾಡುವರು
ಪಿತದೇವನ ಮಹಿಮೆಯನು ಈ ಪರಿ
ಹೊಗಳಿ ಸಾರುವರವರು.

### ಯೇಸುವಿನಲ್ಲಿ ಜೀವೋದ್ಧಾರ

12 ಪ್ರಿಯ ಸಹೋದರರೇ, ನಾನು ನಿಮ್ಮಲ್ಲಿದ್ದಾಗ ನೀವು ಯಾವಾಗಲೂ ನನ್ನ ಮಾತಿನಂತೆ
ನಡೆದುಕೊಂಡಿರಿ. ಈಗ, ನಾನು ದೂರವಿರುವಾಗ ಇನ್ನೂ ಹೆಚ್ಚಿನ ಆಸಕ್ತಿಯಿಂದ ನಡೆದುಕೊಳ್ಳಿ. ನಿಮ್ಮ
ಜೀವೋದ್ಧಾರಕ್ಕಾಗಿ ಭಯಭಕ್ತಿಯಿಂದ ಶ್ರಮಿಸಿರಿ. 13ಏಕೆಂದರೆ ದೈವಚಿತ್ತವನ್ನು ನೀವು ನೆರವೇರಿಸುವಂತೆ
ಅವರೇ ನಿಮ್ಮಲ್ಲಿ ಸತ್ಪ್ರೇರಣೆಯನ್ನೂ ಸತ್ಫಲವನ್ನೂ ನೀಡುತ್ತಾರೆ.
14 ನೀವು ಮಾಡುವ ಎಲ್ಲಾ ಕಾರ್ಯಗಳನ್ನು ಗೊಣಗುಟ್ಟದೆ, ವಿವಾದವಿಲ್ಲದೆ, ಏಕಮನಸ್ಸಿನಿಂದ
ಮಾಡಿ. 15ನಿರ್ದೋಷಿಗಳೂ ನಿಷ್ಕಳಂಕರೂ ಆಗಿರಿ. ವಕ್ರಬುದ್ಧಿಯ ದುಷ್ಟಜನರ ನಡುವೆ ದೇವರ ಪರಿಶುದ್ಧ
ಮಕ್ಕಳಂತೆ ಬಾಳಿರಿ. ಜೀವದಾಯಕ ಸಂದೇಶವನ್ನು ಎತ್ತಿಹಿಡಿಯಿರಿ; ಆಗ ನಕ್ಷತ್ರಗಳು ಆಕಾಶವನ್ನು
ಬೆಳಗಿಸುವಂತೆ ಪ್ರಪಂಚದಲ್ಲಿ ನೀವು ಕಂಗೊಳಿಸುವಿರಿ.. 16ಹೀಗೆ ನೀವು ನಡೆದುಕೊಂಡರೆ ನನ್ನ ಸೇವೆ
ವ್ಯರ್ಥವಾಗದೆ, ಶ್ರಮ ನಿಷ್ಫಲವಾಗದೆ ಫಲಪ್ರದವಾಯಿತೆಂದು ಕ್ರಿಸ್ತರ ದಿನದಂದು ನಾನು ಹೆಮ್ಮೆ ಪಡಬಹುದು.
17 ನಿಮ್ಮ ವಿಶ್ವಾಸವೆಂಬ ಬಲಿಕಾಣಿಕೆಯ ಮೇಲೆ ನನ್ನ ರಕ್ತವನ್ನು ಧಾರೆಯಾಗಿ ಹರಿಸಬೇಕಾಗಿ
ಬಂದರೂ ನನಗೆ ಸಂತೋಷವೇ; ನಿಮ್ಮೆಲ್ಲರೊಡನೆ ಸೇರಿ ಸಂತೋಷಿಸುತ್ತೇನೆ. 18ಅದೇ ರೀತಿ ನೀವು ಸಹ
ನನ್ನೊಡನೆ ಸಂತೋಷದಿಂದ ಸಂಭ್ರಮಿಸಿರಿ.

### ಯೇಸುವಿನ ದಾಸರು

19 ಪ್ರಭು ಯೇಸುವಿನ ಚಿತ್ತವಾದಲ್ಲಿ ತಿಮೊಥೇಯನನ್ನು ನಿಮ್ಮ ಬಳಿಗೆ ಬೇಗನೆ
ಕಳುಹಿಸಬೇಕೆಂದಿದ್ದೇನೆ. ಆತನಿಂದ ನಿಮ್ಮ ಸಮಾಚಾರವನ್ನು ತಿಳಿದು ನಾನು ಹರ್ಷಗೊಳ್ಳುತ್ತೇನೆ. 20ಆತನಂತೆ
ನಿಷ್ಕಪಟವಾಗಿ ನಿಮ್ಮ ಯೋಗಕ್ಷೇಮವನ್ನು ಬಯಸುವವರು ಬೇರೆ ಯಾರೂ ಇಲ್ಲಿಲ್ಲ. 21ಇತರರೆಲ್ಲರೂ
ಸ್ವಕಾರ್ಯದಲ್ಲಿ ಮಗ್ನರಾಗಿರುವವರೇ ಹೊರತು ಯೇಸುಸ್ವಾಮಿಯ ಕಾರ್ಯದಲ್ಲಿ ನಿರತರಾಗಿಲ್ಲ.
22ತಿಮೊಥೇಯನ ಯೋಗ್ಯತೆಯನ್ನು ನೀವು ಬಲ್ಲಿರಿ. ತಂದೆಯೊಂದಿಗೆ ಮಗನು ದುಡಿಯುವಂತೆ,
ಶುಭಸಂದೇಶದ ಸೇವೆಯಲ್ಲಿ ನನ್ನೊಂದಿಗೆ ಆತನು ದುಡಿದಿದ್ದಾನೆ. 23ನನ್ನ ಬಗ್ಗೆ ನಡೆಯುತ್ತಿರುವ
ವಿಚಾರಣೆಯ ಫಲಿತಾಂಶ ತಿಳಿದ ಕೂಡಲೇ ಆತನನ್ನು ನಿಮ್ಮ ಬಳಿಗೆ ಕಳುಹಿಸುತ್ತೇನೆ. 24ಅಲ್ಲದೆ, ದೇವರ
ಚಿತ್ತವಿದ್ದರೆ, ನಾನೇ ನಿಮ್ಮಲ್ಲಿಗೆ ಬೇಗನೆ ಬರುವೆನೆಂಬ ದೃಢ ನಂಬಿಕೆಯೂ ನನಗಿದೆ.
25 ನನಗೆ ನೆರವಾಗಲು ನೀವು ಕಳುಹಿಸಿದ ಸಹೋದರ ಎಪಫ್ರೋದಿತನು ನಿಮ್ಮಲ್ಲಿಗೆ
ಹಿಂದಿರುಗುವುದು ಅವಶ್ಯವೆಂದು ಭಾವಿಸುತ್ತೇನೆ. ಅವನು ನನ್ನೊಂದಿಗೆ ದುಡಿಯುತ್ತಾ, ಹೋರಾಡುತ್ತಾ
ಬಂದಿದ್ದಾನೆ. 26ನಿಮ್ಮನ್ನೆಲ್ಲಾ ನೋಡಲು ಅವನು ಹಂಬಲಿಸುತ್ತಿದ್ದಾನೆ. ತಾನು ಅಸ್ವಸ್ಥನಾದ ಸುದ್ಧಿಯು ನಿಮ್ಮ
ಕಿವಿಗೆ ಮುಟ್ಟಿತೆಂದು ತಿಳಿದು ಬಹಳ ವ್ಯಸನಪಡುತ್ತಿದ್ದಾನೆ. 27ಅವನು ಅಸ್ವಸ್ಥನಾದದ್ದು ನಿಜ; ಸಾವಿನ
ದವಡೆಯಿಂದ ಪಾರಾದದ್ದೂ ನಿಜ. ದೇವರ ಕರುಣೆ ಅವನ ಮೇಲೆ ಮಾತ್ರವಲ್ಲದೆ ನನ್ನ ಮೇಲೂ
ಇದ್ದುದರಿಂದ ನನಗೆ ದುಃಖದ ಮೇಲೆ ದುಃಖ ಬರದಂತಾಯಿತು. 28ಎಪಫ್ರೋದಿತನನ್ನು ನಿಮ್ಮ ಬಳಿಗೆ
ಕಳುಹಿಸಲು ತವಕದಿಂದಿದ್ದೇನೆ. ಅವನನ್ನು ಕಂಡು ನಿಮಗೆ ಆನಂದವಾಗುವುದು, ನನ್ನ ದುಃಖವೂ

ಶಮನವಾಗುವುದು. 29ಪ್ರಭುವಿನ ಹೆಸರಿನಲ್ಲಿ ನೀವು ಅವನನ್ನು ತುಂಬು ಹೃದಯದಿಂದ ಸ್ವಾಗತಿಸಿರಿ.
ಅವನಂಥವರಿಗೆ ಸೂಕ್ತ ಗೌರವ ಸಲ್ಲಿಸಿರಿ. 30ಕ್ರಿಸ್ತಯೇಸುವಿನ ಸೇವೆಯಲ್ಲಿ ಅವನು ಸತ್ತು ಬದುಕಿದ್ದಾನೆ. ನೀವು
ಕೊಡಲು ಸಾಧ್ಯವಾಗದೆ ಹೋದ ನೆರವನ್ನು ಅವನು ನನಗೆ ಕೊಟ್ಟು ಸೇವೆಯನ್ನು ಪೂರ್ಣಗೊಳಿಸಿದ್ದಾನೆ.

## ಯೇಸುವಿನಲ್ಲಿ ಸತ್ಸಂಬಂಧ

**3** ಕೊನೆಯದಾಗಿ ಸಹೋದರರೇ, ಪ್ರಭುವಿನಲ್ಲಿ ಆನಂದಿಸಿರಿ. ನಾನು ನಿಮಗೆ ಮೊದಲೇ ತಿಳಿಸಿದಂತೆ
ಇದನ್ನು ಮತ್ತೆ ಮತ್ತೆ ಬರೆಯುವುದರಲ್ಲಿ ನನಗೆ ಬೇಸರವಿಲ್ಲ; ಇದು ನಿಮ್ಮ ಹಿತಕ್ಕಾಗಿಯೇ. 2ನಿಮಗೆ
ಸುನ್ನತಿಯಾಗಬೇಕೆಂದು ಬೋಧಿಸುವವರ ವಿಷಯದಲ್ಲಿ ಜಾಗರೂಕರಾಗಿರಿ. ಅವರು ದುಷ್ಕರ್ಮಿಗಳು,
ಶ್ವಾನಗಳಿಗೆ ಸಮಾನರು. 3ನಿಜವಾದ ಸುನ್ನತಿ ಪಡೆದವರು ನಾವು. ಏಕೆಂದರೆ, ನಾವು ಪವಿತ್ರಾತ್ಮ ಅವರ
ಪ್ರೇರಣೆಯಿಂದ ದೇವರನ್ನು ಆರಾಧಿಸುತ್ತೇವೆ. ಕ್ರಿಸ್ತಯೇಸುವಿನ ಅನ್ಯೋನ್ಯತೆಯಲ್ಲಿ ಹರ್ಷಿಸುತ್ತೇವೆ.
ಬಾಹ್ಯಾಚರಣೆಗಳಲ್ಲೇ ನಂಬಿಕೆಯಿಡದೆ ಬಾಳುತ್ತೇವೆ. 4ಇಂಥ ಬಾಹ್ಯಾಚರಣೆಗಳಲ್ಲಿ ನಂಬಿಕೆ ಇಡಲು ತಮಗೆ
ಹಕ್ಕು ಇದೆಯೆಂದು ಯಾರಾದರೂ ಭಾವಿಸಿದರೆ, ನನ್ನ ಹಕ್ಕು ಅದಕ್ಕೂ ಮಿಗಿಲಾದುದು ಎಂದೇ ಹೇಳುತ್ತೇನೆ.
5ಹುಟ್ಟಿದ ಎಂಟನೆಯ ದಿನ ನನಗೆ ಸುನ್ನತಿಯಾಯಿತು; ಹುಟ್ಟಿನಿಂದ ನಾನು ಇಸ್ರಯೇಲನು, ಬೆನ್ಯಮೀನ
ಕುಲದವನು; ಅಪ್ಪಟ ಹಿಬ್ರಿಯನು, 6ಧರ್ಮಶಾಸ್ತ್ರದ ದೃಷ್ಟಿಯಲ್ಲಿ ನಿಷ್ಠಾವಂತ ಫರಿಸಾಯನು; ಮತಾಸಕ್ತಿಯ
ದೃಷ್ಟಿಯಿಂದ ಧರ್ಮಸಭೆಯ ಹಿಂಸಕನು; ಧರ್ಮಶಾಸ್ತ್ರ ವಿಧಿನಿಯಮಗಳ ಪಾಲನೆಯಲ್ಲಿ ನಿಂದಾರಹಿತನು.
7ಇವನ್ನೆಲ್ಲಾ ಲಾಭವೆಂದು ಪರಿಗಣಿಸಿದ್ದ ನಾನು ಈಗ ಕ್ರಿಸ್ತಯೇಸುವಿನ ಸಲುವಾಗಿ ನಷ್ಟವೆಂದೇ ಎಣಿಸುತ್ತೇನೆ.
8ನಿಶ್ಚಯವಾಗಿಯೂ ನನ್ನ ಪ್ರಭು ಯೇಸುಕ್ರಿಸ್ತರನ್ನು ಅರಿತುಕೊಳ್ಳುವುದೇ ಉತ್ಕೃಷ್ಟವಾದುದೆಂದು
ಮನದಟ್ಟಾಗಿರುವುದರಿಂದ ಸಮಸ್ತವನ್ನು ವ್ಯರ್ಥವೆಂದೇ ಎಣಿಸುತ್ತೇನೆ. ಅವರನ್ನು ಲಭ್ಯವಾಗಿಸಿಕೊಳ್ಳುವ
ಸಲುವಾಗಿ ಎಲ್ಲವನ್ನೂ ತೊರೆದುಬಿಟ್ಟಿದ್ದೇನೆ, ಎಲ್ಲವನ್ನೂ ಕಸವೆಂದೇ ಪರಿಗಣಿಸುತ್ತೇನೆ. 9ಧರ್ಮಶಾಸ್ತ್ರದ
ಪಾಲನೆಯಿಂದ ದೊರಕುವ, ನನ್ನದೇ ಎಂದು ಹೇಳಿಕೊಳ್ಳಬಹುದಾದ ಸತ್ಸಂಬಂಧ ಯಾವುದೂ ನನಗಿಲ್ಲ.
ಪ್ರತಿಯಾಗಿ, ನಾನು ಕ್ರಿಸ್ತಯೇಸುವಿನಲ್ಲಿಟ್ಟಿರುವ ವಿಶ್ವಾಸದ ಪ್ರಯುಕ್ತ ದೇವರೊಂದಿಗೆ ಸರಿಯಾದ
ಸತ್ಸಂಬಂಧವನ್ನು ಹೊಂದಿದ್ದೇನೆ. ಈ ಸಂಬಂಧವು ದೇವರು ನನಗೆ ದಯಪಾಲಿಸಿರುವ ಅನುಗ್ರಹ. ನನ್ನ
ವಿಶ್ವಾಸದ ಆಧಾರದ ಮೇಲೆ ಅವರೇ ನೀಡಿರುವ ಕೃಪಾವರ. 10ಯೇಸುಸ್ವಾಮಿಯನ್ನು ಅರಿಯಬೇಕು; ಅವರ
ಪುನರುತ್ಥಾನದ ಪ್ರಭಾವವನ್ನು ಅನುಭವಿಸಬೇಕು; ಅವರ ಯಾತನೆಗಳಲ್ಲಿ ಪಾಲುಗೊಳ್ಳಬೇಕು; ಅವರ
ಮರಣದಲ್ಲಿ ಅವರಂತೆಯೇ ಆಗಬೇಕು – ಇದೇ ನನ್ನ ಹೆಬ್ಬಯಕೆ. 11ಹೀಗೆ ನಾನೂ ಸಹ
ಮೃತ್ಯುಂಜಯನಾಗುತ್ತೇನೆ ಎಂಬುದೇ ನನ್ನ ನಂಬಿಕೆ – ನಿರೀಕ್ಷೆ.

## ಯೇಸುವಿನ ಸಾನ್ನಿಧ್ಯಕ್ಕೆ

12 ಈಗಾಗಲೇ ನಾನಿದೆಲ್ಲವನ್ನೂ ಸಾಧಿಸಿದ್ದೇನೆ, ಪರಿಪೂರ್ಣತೆಯನ್ನು ಗಳಿಸಿದ್ದೇನೆ ಎಂದು ನೀವು
ಭಾವಿಸಬಾರದು. ಕ್ರಿಸ್ತಯೇಸು ನನ್ನನ್ನು ಯಾವುದಕ್ಕಾಗಿ ತಮ್ಮವನನ್ನಾಗಿ ಮಾಡಿಕೊಂಡರೋ, ಅದನ್ನು
ನನ್ನದಾಗಿಸಿಕೊಳ್ಳಲು ನಾನು ಪ್ರಯತ್ನಿಸುತ್ತಿದ್ದೇನೆ. 13ಸಹೋದರರೇ, ಆ ಗುರಿಯನ್ನು ತಲುಪಿದ್ದೇನೆಂದು
ನಾನೆಂದೂ ಹೇಳಿಕೊಂಡಿಲ್ಲ. ಆದರೆ ಇದು ನಿಜ. ಹಿಂದಿನ ಸಂಗತಿಗಳನ್ನು ಮರೆತುಬಿಟ್ಟು, ಮುಂದಿನವುಗಳ
ಮೇಲೆ ಕಣ್ಣಿಟ್ಟು ನಾನು ಓಡುತ್ತಿದ್ದೇನೆ. 14ಮೇಲಣ ಬಹುಮಾನವನ್ನು ಪಡೆಯಲೆಂದು ದೇವರು ನನಗೆ
ಕ್ರಿಸ್ತಯೇಸುವಿನ ಮುಖಾಂತರ ಕರೆನೀಡಿದ್ದಾರೆ. ಆ ಗುರಿಯನ್ನು ತಲುಪಲೆಂದೇ ನಾನು
ಮುಂದೋಡುತ್ತಲಿದ್ದೇನೆ. 15ನಮ್ಮಲ್ಲಿ ಪರಿಣತರಾದವರು ಈ ವಿಷಯದಲ್ಲಿ ಇದೇ ಮನೋಭಾವನೆಯಿಂದ
ಇರಬೇಕು. ಯಾವುದಾದರೂ ಒಂದು ವಿಷಯದಲ್ಲಿ ನೀವು ಭಿನ್ನಾಭಿಪ್ರಾಯ ಉಳ್ಳವರಾಗಿದ್ದರೆ ದೇವರು
ನಿಜಾಂಶವನ್ನು ಸ್ಪಷ್ಟೀಕರಿಸುವರು. 16ಅಂತೂ, ಇದುವರೆಗೆ ನಾವು ಎಷ್ಟೇ ಮುಂದುವರೆದಿದ್ದರೂ ಅದೇ
ಮಾರ್ಗದಲ್ಲಿ ಸಾಗೋಣ.

17 ಸಹೋದರರೇ, ನೀವು ನನ್ನನ್ನು ಅನುಸರಿಸಿರಿ. ನಮ್ಮಂತೆ ಆದರ್ಶಜೀವನ ನಡೆಸುವವರನ್ನು
ಅನುಸರಿಸಿ ಬಾಳಿರಿ. 18ಕ್ರಿಸ್ತಯೇಸುವಿನ ಶಿಲುಬೆಗೆ ವಿರೋಧವಾಗಿ ನಡೆಯುವವರು ಅನೇಕರಿದ್ದಾರೆ. ಇದನ್ನು
ನಾನು ಹಲವಾರು ಸಾರಿ ತಿಳಿಸಿರುವಂತೆ ಈಗಲೂ ಅತೀವ ದುಃಖದಿಂದ ಹೇಳುತ್ತಿದ್ದೇನೆ. 19ಹೊಟ್ಟೆಯೇ
ಅವರ ದೇವರು, ನಾಚಿಕೆಪಡಿಸುವ ಕಾರ್ಯಗಳಲ್ಲಿಯೇ ಅವರಿಗೆ ಹೆಮ್ಮೆ, ನಶ್ವರವಾದ ವಿಷಯಗಳಲ್ಲಿಯೇ
ಅವರಿಗೆ ವ್ಯಾಮೋಹ. ಹೀಗಾಗಿ, ವಿನಾಶವೇ ಅವರ ಅಂತ್ಯ. 20ನಾವಾದರೋ ಸ್ವರ್ಗಸಾಮ್ರಾಜ್ಯದ ಪ್ರಜೆಗಳು,
ಉದ್ಧಾರಕರಾದ ಪ್ರಭು ಯೇಸುಕ್ರಿಸ್ತರು ಪುನರಾಗಮಿಸುವುದು ಅಲ್ಲಿಂದಲೇ ಎಂದು ಎದುರುನೋಡುತ್ತಿದ್ದೇವೆ.
21ಅವರು ಸಮಸ್ತವನ್ನು ಸ್ವಾಧೀನಪಡಿಸಿಕೊಳ್ಳುವರು; ನಶ್ವರವಾದ ನಮ್ಮ ದೀನ ದೇಹಗಳನ್ನು ತಮ್ಮ
ಶಕ್ತಿಯಿಂದ ರೂಪಾಂತರಗೊಳಿಸಿ ತಮ್ಮ ತೇಜೋಮಯ ಶರೀರದಂತೆ ಮಾಡುವರು.

### ಯೇಸುವಿಗಾಗಿ ಜೀವಿಸಿರಿ

**4** ಹೀಗಿರಲಾಗಿ ಒಲವಿನ ಸಹೋದರರೇ, ನನ್ನ ಅತಿ ಪ್ರಿಯರೇ, ಆಪ್ತರೇ, ನನ್ನ ಮುದವೂ ಮುಕುಟವೂ
ಆದವರೇ, ಪ್ರಭುವಿನಲ್ಲಿ ದೃಢ ವಿಶ್ವಾಸಿಗಳಾಗಿ ಬಾಳಿರಿ.

2 ಯುವೋದ್ಯಳು ಮತ್ತು ಸಂತುಕೆ ಇವರಲ್ಲಿ ನನ್ನದೊಂದು ಬಿನ್ನಹ: ನಿಮ್ಮ ಭಿನ್ನಾಭಿಪ್ರಾಯಗಳನ್ನು
ತೊರೆದು ಪ್ರಭುವಿನಲ್ಲಿ ಒಂದಾಗಿ ಬಾಳಿರಿ. 3ನನ್ನ ಜೊತೆ ಸೇವಕನಾದ ನೀನು ಈ ಮಹಿಳೆಯರಿಗೆ
ನೆರವಾಗಬೇಕು. ಇವರು ಸಹ ಕ್ಲೇಮಂತನು ಮತ್ತು ಇತರ ಸಹಸೇವಕರೊಡನೆ ನನ್ನೊಂದಿಗೆ ಶುಭಸಂದೇಶದ
ಪ್ರಚಾರಕಾರ್ಯದಲ್ಲಿ ಸಹಕರಿಸಿರುತ್ತಾರೆ. ಇವರೆಲ್ಲರ ಹೆಸರುಗಳು ನಿತ್ಯಜೀವಬಾಧ್ಯರ ಪಟ್ಟಿಯಲ್ಲಿವೆ.

4 ಪ್ರಭುವಿನಲ್ಲಿ ನೀವು ಸತತವೂ ಆನಂದಿಸಿರಿ. ಆನಂದಿಸಬೇಕೆಂದು ಮತ್ತೆ ಒತ್ತಿ ಹೇಳುತ್ತೇನೆ. 5ನಿಮ್ಮ
ಸಹನೆ, ಸಹಾನುಭೂತಿ ಸರ್ವರಿಗೂ ತಿಳಿದಿರಲಿ. ಪ್ರಭುವಿನ ಪುನರಾಗಮನ ಸಮೀಪಿಸಿದೆ. 6ಯಾವ
ವಿಷಯದಲ್ಲೂ ಚಿಂತಿಸದೆ, ನಿಮ್ಮ ಅಗತ್ಯಗಳಿಗಾಗಿ ದೇವರಲ್ಲಿ ಪ್ರಾರ್ಥಿಸಿರಿ. ಪ್ರಾರ್ಥಿಸುವಾಗಲೆಲ್ಲಾ ನಿಮ್ಮಲ್ಲಿ
ಕೃತಜ್ಞತಾ ಭಾವ ಇರಲಿ. 7ಆಗ ಮನುಷ್ಯಗ್ರಹಿಕೆಗೂ ಮೀರಿದ ದೈವಶಾಂತಿಯು ನಿಮ್ಮ ಹೃನ್ಮನಗಳನ್ನು
ಕ್ರಿಸ್ತೇಸುವಿನ ಅನ್ಯೋನ್ಯತೆಯಲ್ಲಿ ಸುರಕ್ಷಿತವಾಗಿ ಕಾಪಾಡುವುದು.

8 ಕಡೆಯದಾಗಿ ಸಹೋದರರೇ, ಯಾವುದು ಸತ್ಯವು–ಮಾನ್ಯವು, ನ್ಯಾಯವು–ಶುದ್ಧವು, ಪ್ರೀತಿಕರವು–
ಮನೋಹರವು ಆಗಿದೆಯೋ ಯಾವುದು ಸದ್ಗುಣವು–ಸ್ತುತ್ಯಾರ್ಹವು ಆಗಿದೆಯೋ ಅಂಥವುಗಳಲ್ಲಿ
ಮಗ್ನರಾಗಿರಿ. 9ನೀವು ನನ್ನಿಂದ ಕಲಿತವು ಹಾಗೂ ಅರಿತವುಗಳನ್ನು, ಕೇಳಿದವು ಹಾಗೂ ಕಂಡವುಗಳನ್ನು
ನಿಮ್ಮ ಜೀವಿತದಲ್ಲಿ ಕಾರ್ಯರೂಪಕ್ಕೆ ತನ್ನಿರಿ. ಆಗ ಶಾಂತಿದಾಯಕ ದೇವರು ನಿಮ್ಮ ಸಂಗಡ ಇರುವರು.

### ಸಂತೃಪ್ತ ಸಮಜೀವನ

10 ನನ್ನ ಬಗ್ಗೆ ನಿಮಗಿರುವ ಮಮತೆಯು ಇಷ್ಟು ದಿನಗಳಾದ ಮೇಲೆ ಪುನಃ ಅರಳಿದ್ದಕ್ಕೆ ಪ್ರಭುವಿನಲ್ಲಿ
ನಾನು ಬಹಳ ಸಂತೋಷ ಪಡುತ್ತೇನೆ. ಇಂಥ ಮಮತೆ ನಿಮಗೆ ಮೊದಲಿನಿಂದ ಇತ್ತಾದರೂ ಅದನ್ನು
ವ್ಯಕ್ತಪಡಿಸಲು ನಿಮಗೆ ಸೂಕ್ತ ಸಂದರ್ಭ ಒದಗಿರಲಿಲ್ಲ. 11ನಾನು ಯಾವುದೋ ಕೊರತೆಯಲ್ಲಿರುವೆನೆಂದು
ಸೂಚಿಸಲು ಇದನ್ನು ಹೇಳುತ್ತಿಲ್ಲ. ನಾನು ಯಾವ ಸ್ಥಿತಿಯಲ್ಲಿದ್ದರೂ ತೃಪ್ತಿಯಿಂದಿರಲು ಕಲಿತುಕೊಂಡಿದ್ದೇನೆ.
12ಬಡತನ ಇರಲಿ, ಸಿರಿತನವಿರಲಿ, ಕೊರತೆಯಿರಲಿ, ಸಮೃದ್ಧಿ ಇರಲಿ, ಹಸಿದಿರಲಿ, ಹೊಟ್ಟೆ ತುಂಬಿರಲಿ –
ಯಾವ ಸ್ಥಿತಿಯಲ್ಲಿದ್ದರೂ, ಎಲ್ಲಾ ವೇಳೆಯಲ್ಲಿಯೂ ತೃಪ್ತನಾಗಿರುವ ರಹಸ್ಯವನ್ನು ತಿಳಿದಿದ್ದೇನೆ. 13ಸರ್ವೇಶನ
ಶಕ್ತಿಯಿಂದ ಸರ್ವವನ್ನೂ ಸಾಧಿಸುವ ಸಾಮರ್ಥ್ಯ ನನಗಿದೆ. 14ಆದರೂ ನನ್ನ ಸಂಕಷ್ಟಗಳಲ್ಲಿ ಸಹಾಯ
ಮಾಡಿದುದು ನಿಮ್ಮ ಸೌಜನ್ಯವೇ ಸರಿ.

15 ಫಿಲಿಪ್ಪಿಯ ಸಹೋದರರೇ, ನಾನು ಶುಭಸಂದೇಶವನ್ನು ಸಾರಲು ಹೊರಟ ಪ್ರಾರಂಭದ
ದಿನಗಳಲ್ಲಿ ಮಕೆದೋನಿಯವನ್ನು ಬಿಟ್ಟು ಹೋದಾಗ ನೀವಲ್ಲದೆ ಬೇರೆ ಯಾವ ಸಭೆಯೂ ನನ್ನ ಆಯ–
ವ್ಯಯಗಳಲ್ಲಿ ನೆರವಾಗಿರಲಿಲ್ಲ. ಇದು ನಿಮಗೆ ತಿಳಿದ ವಿಷಯ. 16ನಾನು ಥೆಸಲೋನಿಕದಲ್ಲಿದ್ದಾಗಲೂ ನನ್ನ

ಕೊರತೆಯನ್ನು ನೀಗಿಸಲು ಒಂದೆರಡು ಬಾರಿ ಧನಸಹಾಯವನ್ನು ಕಳುಹಿಸಿದಿರಿ. [17]ನಿಮ್ಮಿಂದ ಸಹಾಯ
ಪಡೆಯಬೇಕೆಂಬುದು ನನ್ನ ಉದ್ದೇಶವಲ್ಲ. ಆದರೆ ಈ ಸಹಾಯದಿಂದ ನಿಮಗೆ ಮುಂದೆ ದೊರಕುವ
ಪ್ರತಿಫಲವು ಸಮೃದ್ಧಿಯಾಗಲೆಂದೇ ನನ್ನ ಇಚ್ಛೆ. [18]ನೀವು ಕಳುಹಿಸಿಕೊಟ್ಟಿದ್ದೆಲ್ಲವೂ ನನಗೆ ಸಂದಾಯವಾಗಿದೆ.
ಈಗ ಅಗತ್ಯಕ್ಕಿಂತಲೂ ಅಧಿಕವಾಗಿದೆ, ಯಥೇಚ್ಛವಾಗಿದೆ. ಎಪಫ್ರೋದಿತನ ಮೂಲಕ ನೀವು ಕಳುಹಿಸಿದ್ದೆಲ್ಲವೂ
ನನಗೆ ತಲುಪಿದೆ. ನಿಮ್ಮ ಕೊಡುಗೆ ಸುಗಂಧ ಕಾಣಿಕೆಯಾಗಿದೆ, ದೇವರಿಗೆ ಮೆಚ್ಚಿಗೆಯಾದ ಇಷ್ಟಾರ್ಥ
ಬಲಿಯಾಗಿದೆ. [19]ನನ್ನ ದೇವರು ತಮ್ಮ ಮಹದೈಶ್ವರ್ಯದಿಂದ ನಿಮ್ಮ ಅಗತ್ಯಗಳನ್ನೆಲ್ಲಾ ಕ್ರಿಸ್ತಯೇಸುವಿನ
ಮುಖಾಂತರ ಪೂರೈಸುವರು. [20]ನಮ್ಮ ತಂದೆಯಾದ ದೇವರಿಗೆ ನಿರಂತರವೂ ಮಹಿಮೆ ಸಲ್ಲಲಿ!

### ಅಂತಿಮ ವಂದನೆ

21 ಕ್ರಿಸ್ತಯೇಸುವಿನಲ್ಲಿ ಎಲ್ಲ ದೇವಜನರಿಗೂ ನನ್ನ ವಂದನೆಗಳನ್ನು ತಿಳಿಸಿರಿ. ನನ್ನೊಡನೆ ಇರುವ
ಸಹೋದರರು ನಿಮಗೆ ತಮ್ಮ ಶುಭಾಶಯಗಳನ್ನು ಕಳುಹಿಸಿದ್ದಾರೆ. [22]ಅಲ್ಲದೆ, ಇಲ್ಲಿರುವ ದೇವಜನರೆಲ್ಲರೂ
ವಿಶೇಷವಾಗಿ ಚಕ್ರವರ್ತಿಯ ಅರಮನೆಯಲ್ಲಿರುವ ಕ್ರೈಸ್ತವಿಶ್ವಾಸಿಗಳು ತಮ್ಮ ಪ್ರಣಾಮಗಳನ್ನು ಸಲ್ಲಿಸಿದ್ದಾರೆ.
[23]ಪ್ರಭು ಯೇಸುಕ್ರಿಸ್ತರ ಅನುಗ್ರಹ ನಿಮ್ಮೆಲ್ಲರಲ್ಲಿ ಇರಲಿ !